ವರ್ಷ	ಅಂದಾಜು	ಅನುದಾನ
1998-1999	-	-
1999-2000	9.00	1.21
2000-2001	9.00	1.22

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಆಯವ್ಯಯದಲ್ಲಿ ಸೇರಿಸಲಾಗಿದೆ. ಅವುಗಳಿಂದರೆ,

		ಅಂದಾಜು	ಅನುದಾನ
1.	ಗೊಟ್ಟಿಕೆರೆ	4.00	1.20
2.	ಹಬ್ಬಕ್ಕನಹಳ್ಳಿ ಕೆರೆ	5.00	0.02

ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಲಾದ ಕಂಪ್ಯೂಟರ್‌ಗಳು

4491 - ಶ್ರೀ ಪಿ.ಸಿ. ಮೋಹನ್ (ಚಿಕ್ಕಪೇಟೆ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಲಾದ ಕಂಪ್ಯೂಟರ್‌ಗಳ ಒಟ್ಟು ಸಂಖ್ಯೆ ಎಷ್ಟು?

ಆ) ಯಾವ ಯಾವ ಇಲಾಖೆಯನ್ನು ಕಂಪ್ಯೂಟರೀಕರಣಗೊಳಿಸಲಾಗಿದೆ?

ಇ) ಕಂಪ್ಯೂಟರ್ ವಿಭಾಗದಲ್ಲಿ ಕೆಲಸ ಮಾಡುತ್ತಿರುವವರ ಒಟ್ಟು ಸಂಖ್ಯೆ ಎಷ್ಟು? (ವೇತನದ ವಿವರ ನೀಡುವುದು)

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) 21.

ಆ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಇನ್ನೂ ಯಾವುದೇ ಇಲಾಖೆಯನ್ನು ಸಂಪೂರ್ಣವಾಗಿ ಕಂಪ್ಯೂಟರೀಕರಣಗೊಳಿಸಿರುವುದಿಲ್ಲ.

ಇ) ನಗರ ಪಾಲಿಕೆಯ ಸಿಬ್ಬಂದಿಯವರಿಗೆ ಕಂಪ್ಯೂಟರ್ ತರಬೇತಿಯನ್ನು ನೀಡಲಾಗುತ್ತಿದ್ದು, ಕಂಪ್ಯೂಟರೀಕರಣ ಕೆಲಸಗಳಿಗೆ ಪಾಲಿಕೆಯ ಸಿಬ್ಬಂದಿಯವರ ಸೇವೆಯನ್ನು ಉಪಯೋಗಿಸಿಕೊಳ್ಳಲಾಗುವುದು.